# ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.

**ಉಪಸ್ಥಿತರುಃ- ಶ್ರೀ ರಾಹುಲ ಚಾಂಭಾರ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

**ಸಿ.ಸಿ. ನಂಃ 321/2021**

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಸೈದಾಪುರ ಪೊಲೀಸ್ ಠಾಣೆ**

**// ವಿರುದ್ದ //**

**ಆರೋಪಿ ಃ ನಿಂಗಪ್ಪ ಮತ್ತು ಇತರರು**

**ದೋಷಾರೋಪಣೆ**

| | |
|---|---|
| ಆರೋಪಿತರುಃ 1. | ನಿಂಗಪ್ಪ, ತಂದೆಃ ಭೀಮಣ್ಣ ಮಡಿವಾಳ, ವಃ 60 ವರ್ಷ, ಉಃ ಒಕ್ಕಲುತನ. |
| 2. | ಮಹಿಪಾಲರೆಡ್ಡಿ , ತಂದೆಃ ನಿಂಗಪ್ಪ, ವಃ 35 ವರ್ಷ, ಉಃ ಒಕ್ಕಲುತನ. |
| 3. | ರವಿಕುಮಾರ, ತಂದೆಃ ನಿಂಗಪ್ಪ, ವಃ 30 ವರ್ಷ, ಉಃ ಒಕ್ಕಲುತನ. |
| | ಎಲ್ಲರೂ ಸಾಃ ಬಳಿಚಕ್ರ ತಾಃ ಜಿ ಃ ಯಾದಗಿರಿ |

**ಆದ ನಿಮ್ಮ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ,**

ಮೊದಲನೆಯದಾಗಿ ದಿನಾಂಕಃ 30-04-2021 ರಂದು ಬೆಃ 9-30 ಗಂಟೆ ಸುಮಾರಿಗೆ ಸೈದಾಪೂರ ಪೋಲಿಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಬಳಿಚಕ್ರ ಗ್ರಾಮದಲ್ಲಿ ಚಾಸಾಃ 1 ರವರು ತಮ್ಮ ಮನೆಯ ಹತ್ತಿರ ಬಚ್ಚಲು ಕಟ್ಟಲು ತಯಾರು ಮಾಡುತ್ತಿರುವಾಗ 1 ರಿಂದ 3 ನೇ ಆರೋಪಿತರಾದ ನೀವು ಲೇ ಸೂಳೇ ಮಗನೆ ನಮ್ಮ ಜಾಗದಲ್ಲಿ ಯಾಕೆ ಬಚ್ಚಲು ಮಾಡುತಿ ಸೂಳೇ ಮಗನೆ ಅಂತ ಅವಾಚ್ಯ ಶಬ್ದದಿಂದ ಬೈದು, ಈ ಮೂಲಕ ಭಾ. ದಂ. ಸಂ. ಕಲಂ.504 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

2. ಎರಡನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ಮತ್ತು 3 ನೇ ಆರೋಪಿತರಾದ ನೀವು ಚಾಸಾಃ 1 ರವರಿಗೆ ಕೈಯಿಂದ ಹೊಟ್ಟೆಗೆ ಮತ್ತು ಬೆನ್ನಿಗೆ ಹೊಡೆದು ಸ್ವಇಚ್ಚೆಯಿಂದ

ಗುಪ್ತಗಾಯವನ್ನುಂಟು ಮಾಡಿದ್ದು ಈ ಮೂಲಕ ನೀವು ಭಾ.ದಂ.ಸಂ. 323 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

3. ಮೂರನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ಮತ್ತು 3 ನೇ ಆರೋಪಿತರಾದ ನೀವು ಚಾಸಾಃ 1 ರವರು ಮನೆಯ ಕಡೆಗೆ ಹೋಗುತ್ತಿರುವಾಗ ಎದೆಯ ಮೇಲಿನ ಅಂಗಿ ಹಿಡಿದು ಅಡ್ಡಗಟ್ಟಿ ಮುಂದೆ ಹೋಗಲು ಬಿಡದೆ ಅಕ್ರಮವಾಗಿ ಅಡ್ಡಗಟ್ಟಿ ತಡೆದು ನಿಲ್ಲಿಸಿದ್ದು ಈ ಮೂಲಕ ನೀವು ಭಾ.ದಂ.ಸಂ. 341 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

4. ಕೊನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶದಿಂದ ನಿಮ್ಮ ಪೈಕಿ 2 ಮತ್ತು 3 ನೇ ಆರೋಪಿತರಾದ ನೀವು ಚಾಸಾಃ 1 ರವರಿಗೆ ಇನ್ನೊಂದು ಸಲ ನಮ್ಮ ಜಾಗದಲ್ಲಿ ಏನಾದರೂ ಕಟ್ಟಿದರೆ ನಿನಗೆ ದೊತ್ರ ಬಿಚ್ಚಿ ಹೊಡೆಯುತ್ತೇವೆ ಮಗನೆ ಮತ್ತೊಮ್ಮೆ ನಮ್ಮ ತಂಟೆಗೆ ಬಂದರೆ ನಿನ್ನ ಜೀವ ತೆಗೆಯುತ್ತೇವೆ ಅಂತ ಜೀವ ಬೆದರಿಕೆ ಹಾಕಿದ್ದು ಈ ಮೂಲಕ ಭಾ.ದಂ.ಸಂ.ಕಲಂ.506 ಸಹವಾಚಕ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ**
**ಸ್ಥಳ : ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು ಯಾದಗಿರಿ.**